ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ. ಎನ್. ರವಿಕುಮಾರ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 240

ಉತ್ತರಿಸಬೇಕಾದ ದಿನಾಂಕ : 02.02.2021

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯ ಸಹಕಾರ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಮೀಸಲಾತಿ ನೀಡುವ ಕುರಿತು ಸರ್ಕಾರದ ನಿಲುವೇನು;	ರಾಜ್ಯದ ಸಹಕಾರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳಲ್ಲಿ ಬಿಡಿ ವ್ಯಕ್ತಿಗಳನ್ನು ಸದಸ್ಯರನ್ನಾಗಿ ಉಳ್ಳ ಮತ್ತು ಅಂಥ ವರ್ಗದ ಅಥವಾ ಗುಂಪಿನ ಸದಸ್ಯರನ್ನು ಹೊಂದಿರುವ ಪ್ರತಿಯೊಂದು ಸಹಕಾರ ಸಂಘದ, ಮಂಡಲಿಯಲ್ಲಿ ಅಂತಹ ಮೀಸಲಾತಿಯ ಅವಕಾಶವನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ.28–ಎ(3) ರಲ್ಲಿ ಒದಗಿಸಲಾಗಿರುತ್ತದೆ. ಕಲಂ–28–ಎ(3) ರ ಉಧೃತಭಾಗ ಈ ಕೆಳಕಂಡಂತಿರುತ್ತದೆ. (3) [ಪ್ರತಿ ಸಹಕಾರ ಸಂಘದ] [ಮಂಡಲಿ] ಯಲ್ಲಿ– (i) ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಗಳಿಗೆ ಒಂದು ಸ್ಥಾನವನ್ನು ಚುನಾವಣೆ ಮೂಲಕ ಭರ್ತಿ ಮಾಡತಕ್ಕದ್ದು ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವ್ಯಕ್ತಿಗಳಿಗೆ ಒಂದು ಸ್ಥಾನವನ್ನು ಚುನಾವಣೆ ಮೂಲಕ ಭರ್ತಿ ಮಾಡತಕ್ಕದ್ದು.
ಆ	ರಾಜ್ಯದಲ್ಲಿ ಸಹಕಾರ ಕ್ಷೇತ್ರದಲ್ಲಿ ನಡೆಯುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು.)	ರಾಜ್ಯದಲ್ಲಿ ಸಹಕಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳ ಜಿಲ್ಲಾವಾರು ವಿವರವನ್ನು **ಅನುಬಂಧದಲ್ಲಿ** ನೀಡಲಾಗಿದೆ.
ಇ	ಸಹಕಾರಿ ತತ್ವದಡಿ ನಡೆಯುವ ಸಕ್ಕರೆ ಕಾರ್ಖಾನೆಗಳ ಕಳೆದ 3 ವರ್ಷಗಳಲ್ಲಿ ಎಷ್ಟು ಮೊತ್ತದ ಲಾಭಾಂಶವನ್ನು ಸದಸ್ಯರಿಗೆ ವಿತರಿಸಿದೆಯೇ? (ಕಾರ್ಖಾನೆವಾರು ವಿವರ ನೀಡುವುದು)	ರಾಜ್ಯದ ಎಲ್ಲಾ ಸಹಕಾರಿ ಸಕ್ಕರೆ ಕಾರ್ಖಾನೆಗಳು ಕ್ರೋಢೀಕೃತ ನಷ್ಟದಲ್ಲಿ ನಡೆಯುತ್ತಿರುವುದರಿಂದ ಕಳೆದ 3 ವರ್ಷಗಳಲ್ಲಿ ಸದಸ್ಯರಿಗೆ ಯಾವುದೇ ಲಾಭಾಂಶವನ್ನು ವಿತರಿಸಿರುವುದಿಲ್ಲ.

ಸಂಖ್ಯೆ: ಸಿಒ 07 ಪಿಎಂಸಿ 2021

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದಶ್ರೀ ಎಸ್. ರವಿಕುಮಾರ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 240ಕ್ಕೆ **ಅನುಬಂಧ**

ಜಿಲ್ಲಾವಾರು ಕಾರ್ಯನಿರ್ವಹಿಸುತ್ತಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳ ವಿವರಗಳು:

ಕ್ರ. ಸಂ	ಕಾರ್ಖಾನೆಯ ಹೆಸರು ಮತ್ತು ವಿಳಾಸ
ಬೆಳಗಾವಿ ಜಿಲ್ಲೆ	
1	ಚಿದಾನಂದ ಬಸಪ್ರಭು ಕೋರೆ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಚಿಕ್ಕೋಡಿ ತಾ॥, ಬೆಳಗಾವಿ ಜಿಲ್ಲೆ
2	ಘಟಪ್ರಭಾ ಸಹಕಾರಿ ಸಕ್ಕರೆಕಾರ್ಖಾನೆ ನಿ., ಸಂಗನಕೇರಿ, ಗೋಕಾಕ್ ತಾಲ್ಲೂಕು, ಬೆಳಗಾವಿ ಜಿಲ್ಲೆ
3	ಹಾಲಸಿದ್ದನಾಥ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ನಿಪ್ಪಾಣಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ
4	ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಸಂಕೇಶ್ವರ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ
5	ಕೃಷ್ಣಾ ಸಹಕಾರಿ ಸಕ್ಕರೆಕಾರ್ಖಾನೆ ನಿ., ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ
6	ಮಲಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಎಂ.ಕೆ. ಹುಬ್ಬಳ್ಳಿ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ
7	ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಸಿದ್ದಸಮುದ್ರ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ
8	ಸಂಗಮ್ ಸಹಕಾರಿ ಸಕ್ಕರೆಕಾರ್ಖಾನೆ ನಿ., ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
9	ದಿ ಮಾರ್ಕಂಡೇಯ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕಾಕತಿ, ಬೆಳಗಾವಿ ಜಿಲ್ಲೆ.
ಬಾಗಲಕೋಟೆಜಿಲ್ಲೆ	
10	ರೈತರ ಸಸಕಾನಿ, ರನ್ನಾನಗರ, ಮುಧೋಳ ತಾಲ್ಲೂಕು, ಬಾಗಲಕೋಟೆ ಜಿಲ್ಲೆ
ವಿಜಯಪುರ ಜಿಲ್ಲೆ	
11	ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕೃಷ್ಣಾನಗರ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ
12	ಶ್ರೀ ಭೀಮಾಶಂಕರ ಸಸಕಾ ನಿ., ಮರಗೂರು,ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ
ಬೀದರ್ ಜಿಲ್ಲೆ	
13	ಮಹಾತ್ಮಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿಚೆಕ್‌ಮತ್, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ
14	ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಇಮಾಂಪುರ, ಬೀದರ್ ತಾಲ್ಲೂಕು ಮತ್ತು ಜಿಲ್ಲೆ